97847

**ಕರ್ನಾಟಕ ವಿಧಾನ ಪರಿಷತ್ತು**

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರುಗಳಾದ ಶ್ರೀ ಕೆ.ಎ. ತಿಪ್ಪೇಸ್ವಾಮಿ ಮತ್ತು ಶ್ರೀ ಗೋವಿಂದರಾಜು ಇವರುಗಳು ನಿಯಮ 330 ರ ಮೇರೆಗೆ ಸಲ್ಲಿಸಿರುವ ಗಮನ ಸೆಳೆಯುವ ಸೂಚನೆಗೆ ಮಾನ್ಯ ಮುಖ್ಯಮಂತ್ರಿಯವರ ಹೇಳಿಕೆ.**

**ಸೂಚನೆ:**

ನಮ್ಮ ರಾಜ್ಯದ ಮಹಾರಾಷ್ಟ್ರ ಗಡಿಯಲ್ಲಿರುವ ನಮ್ಮ ರಾಜ್ಯಕ್ಕೆ ಸೇರಿದ ಗಡಿ ಗ್ರಾಮಗಳ ಬಗ್ಗೆ ಮಹಾರಾಷ್ಟ್ರ ಸರ್ಕಾರವು ಸದ್ದಿಲ್ಲದೇ ಮಾಹಿತಿಯನ್ನು ಕಲೆಹಾಕುತ್ತಿರುವುದು ಹಾಗೂ ಇಲ್ಲಿನ ಮಹಾರಾಷ್ಟ್ರ ಏಕೀಕರಣ ಸಮಿತಿಯ (ಎಂಇಎಸ್) ಮುಖಂಡರೊಂದಿಗೆ ಚರ್ಚೆ ನಡೆಸುತ್ತಿರುವ ವಿಷಯವನ್ನು ಕುರಿತು ಪ್ರಧಾನ ದಿನಪತ್ರಿಕೆಗಳಲ್ಲಿ ಪ್ರಕಟವಾಗಿರುತ್ತದೆ. ಮಹಾರಾಷ್ಟ್ರ ಸರ್ಕಾರವು ಇಷ್ಟೆಲ್ಲ ಕುತಂತ್ರ ಮಾಡುತ್ತಿದ್ದರೂ, ನಮ್ಮ ರಾಜ್ಯ ಸರ್ಕಾರವು ಕೊನೆಯ ಪಕ್ಷ ನಿಷ್ಕ್ರಿಯವಾಗಿರುವ ಗಡಿ ಕಾನೂನು ತಜ್ಞರ ತಂಡ ಮತ್ತು ಗಡಿ ಸಂರಕ್ಷಣಾ ಆಯೋಗಕ್ಕೆ ಜೀವ ತುಂಬುವ ಕೆಲಸ ಮಾಡುತ್ತಿಲ್ಲ ಮತ್ತು ಈ ವಿಷಯವನ್ನು ರಾಜ್ಯ ಸರ್ಕಾರವು ಗಂಭೀರವಾಗಿ ಪರಿಗಣಿಸಿಲ್ಲದಿರುವುದರಿಂದ ಸ್ಥಳೀಯರು ಆತಂಕ ವ್ಯಕ್ತ ಪಡಿಸುತ್ತಿದ್ದಾರೆ. ಮಹಾರಾಷ್ಟ್ರ ಸರ್ಕಾರವು ಈ ಹಿಂದೆ ಅಂದರೆ, 1956ರಲ್ಲಿ ನ್ಯಾಯಮೂರ್ತಿ ಫಜಲ್ ಅಲಿ ಮತ್ತು ನ್ಯಾಯಮೂರ್ತಿ ಮೆಹರ್ ಚಂದ ಮಹಾಜನ್ ಸಮಿತಿಗಳು ನೀಡಿದ ವರದಿಗಳನ್ನೇ ಪ್ರಶ್ನೆ ಮಾಡಿ ರಾಜ್ಯ-ರಾಜ್ಯಗಳ ಮಧ್ಯೆ ಅನವಶ್ಯಕವಾದ ಸಂಘರ್ಷ, ತಕರಾರುಗಳನ್ನು ಹುಟ್ಟುಹಾಕುತ್ತಿದೆ. ಇಂತಹ ನಾಡಿನ ಗಡಿ-ನೆಲ-ಜಲಕ್ಕೆ ಸಂಬಂಧಿಸಿದ ವಿಷಯವನ್ನು ಸರ್ಕಾರವು ತೀವ್ರವಾಗಿ ಪರಿಗಣಿಸಿ, ಸೂಕ್ತ ನಿರ್ಧಾರ ಕೈಗೊಳ್ಳುವ ಕುರಿತು.

**ಹೇಳಿಕೆ:**

ಕರ್ನಾಟಕ - ಮಹಾರಾಷ್ಟ್ರ ರಾಜ್ಯಗಳ ಗಡಿ ಭಾಗದಲ್ಲಿರುವ ನಮ್ಮ ರಾಜ್ಯಕ್ಕೆ ಸೇರಿದ ಗಡಿ ಗ್ರಾಮಗಳ ಬಗ್ಗೆ ಮಹಾರಾಷ್ಟ್ರ ಸರ್ಕಾರವು ಮಾಹಿತಿಯನ್ನು ಕಲೆಹಾಕುತ್ತಿರುವುದು ಹಾಗೂ ಇಲ್ಲಿನ ಮಹಾರಾಷ್ಟ್ರ ಏಕೀಕರಣ ಸಮಿತಿಯ (ಎಂಇಎಸ್) ಮುಖಂಡರೊಂದಿಗೆ ಚರ್ಚೆ ನಡೆಸುತ್ತಿರುವ ವಿಷಯವು ಪ್ರಧಾನ ದಿನಪತ್ರಿಕೆಗಳಲ್ಲಿ ಪ್ರಕಟವಾಗಿರುವುದು ಹಾಗೂ ಮಹಾರಾಷ್ಟ್ರ ಸರ್ಕಾರವು ಈ ಕುರಿತಂತೆ ಚಟುವಟಿಕೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಮಹಾರಾಷ್ಟ್ರ ರಾಜ್ಯವು 2004 ರಲ್ಲಿ ಸರ್ವೋಚ್ಚ ನ್ಯಾಯಾಲಯದಲ್ಲಿ ಈ ಬಗ್ಗೆ ಮೂಲ ದಾವೆ ಸಂಖ್ಯೆ: 04/2004 ನ್ನು ದಾಖಲಿಸಿದ್ದು, ಅದಕ್ಕೆ ಪೂರಕವಾದ ಲಿಖಿತ ಹೇಳಿಕೆಗಳನ್ನು ಕರ್ನಾಟಕ ರಾಜ್ಯವು ದಾಖಲಿಸಿದೆ. ಸರ್ವೋಚ್ಚ ನ್ಯಾಯಾಲಯದಲ್ಲಿ ದಿನಾಂಕ: 30.08.2022 ರಂದು ಈ ದಾವೆಯು ವಿಚಾರಣೆಗೆ ಬಂದಿದ್ದು ದಿನಾಂಕ: 23.11.2022 ಕ್ಕೆ ಮುಂದೂಡಲ್ಪಟ್ಟಿರುತ್ತದೆ.

ಮಹಾರಾಷ್ಟ್ರ ಸರ್ಕಾರವು 1956 ರಲ್ಲಿ ನ್ಯಾಯಮೂರ್ತಿ ಫಜಲ್ ಅಲಿ ಮತ್ತು ನ್ಯಾಯಮೂರ್ತಿ ಮೆಹರ್ ಚಂದ ಮಹಾಜನ್ ಸಮಿತಿಗಳು ನೀಡಿದ ವರದಿಗಳನ್ನೇ ಪ್ರಶ್ನೆ ಮಾಡಿ ರಾಜ್ಯ-ರಾಜ್ಯಗಳ ಮಧ್ಯೆ ಅನವಶ್ಯಕವಾದ ಸಂಘರ್ಷವನ್ನು ಉಂಟು ಮಾಡುತ್ತಿದೆ. ನಮ್ಮ ನಾಡಿನ ಗಡಿ-ನೆಲ-ಜಲಕ್ಕೆ ಸಂಬಂಧಿಸಿದ ವಿಷಯವನ್ನು ಸರ್ಕಾರವು ತೀವ್ರವಾಗಿ ಪರಿಗಣಿಸಿದ್ದು ಈ ವಿಷಯದಲ್ಲಿ ರಚಿಸಲಾಗಿರುವ ಕರ್ನಾಟಕ ಗಡಿ ಹಾಗೂ ನದಿಗಳ ರಕ್ಷಣಾ ಆಯೋಗವು ರಾಜ್ಯದ ಹಿತವನ್ನು ಕಾಪಾಡುವಲ್ಲಿ ಸಮರ್ಥವಾಗಿ ಕಾರ್ಯ ನಿರ್ವಹಿಸುತ್ತಾ ಬಂದಿರುತ್ತದೆ.

**ಕಡತ ಸಂಖ್ಯೆ: ಸಿಆಸುಇ 158 ರಾಸ 2022**

(ಬಸವರಾಜ ಬೊಮ್ಮಾಯಿ)

ಮುಖ್ಯಮಂತ್ರಿ



... eOffice by G JAGADEESHA, CMO-JS(G)(JOINT SECRETARY, CMO) on 20/09/2022 02:23 PM